**<u>ಗೌರವಾನ್ವಿತ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ., ನ್ಯಾಯಾಲಯ, ಅರಕಲಗೂಡು.</u>**

**ಅಪರಾಧ ಪ್ರಕರಣ ಸಂಖ್ಯೆಃ 59/2019**

| | | |
|---|---|---|
| **ಹೆಸರು** | ಮಂಜೇಗೌಡ | ಚಾಸಾ-5 |
| **ತಂದೆಯ ಹೆಸರು** | ಜವರೇಗೌಡ | |
| **ಉದ್ಯೋಗ** | ವ್ಯವಸಾಯ | ಪ್ರಾಸಾ-3 |
| **ವಾಸ ಸ್ಥಳ** | ನೇರಲಹಳ್ಳಿ ಗ್ರಾಮ | |
| **ದಿನಾಂಕಃ 22.08.2024**ರಂದು ಸಾಕ್ಷಿಗೆ ಪ್ರಮಾಣ ವಚನವನ್ನು ಬೋಧಿಸಲಾಯಿತು. | | |

**<u>ಮುಖ್ಯ ವಿಚಾರಣೆಃ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕ ರವರಿಂದಃ</u>**

ಆರೋಪಿತರ ಪರಿಚಯ ನನಗೆ ಇರುವುದಿಲ್ಲ. ಚಾಸಾ 1 ನನಗೆ ಗೊತ್ತಿಲ್ಲ.

1) ನಿಪಿ 2 ರಲ್ಲಿರುವ ತನ್ನ ಸಹಿಯನ್ನು ಸಾಕ್ಷಿಯು ಗುರುತಿಸಿರುತ್ತಾರೆ. ಸದರಿ ಸಹಿಯನ್ನು ನಿಪಿ2(ಬಿ) ಎಂದು ಗುರುತಿಸಲಾಯಿತು.

2) ನಿಪಿ 3 ರಲ್ಲಿರುವ ತನ್ನ ಸಹಿಯನ್ನು ಸಾಕ್ಷಿಯು ಗುರುತಿಸಿರುತ್ತಾರೆ. ಸದರಿ ಸಹಿಯನ್ನು ನಿಪಿ 3(ಬಿ) ಎಂದು ಗುರುತಿಸಲಾಯಿತು.

ನಿಪಿ 2(ಬಿ) , ನಿಪಿ 3(ಬಿ) ರಲ್ಲಿರುವ ಸಹಿಯನ್ನು ನಾನು ಎಲ್ಲಿ ಹಾಕಿರುತ್ತೇನೆ ಎಂಬುದು ನನಗೆ ತಿಳಿದಿರುವುದಿಲ್ಲ. ಯಾವ ವಿಚಾರವಾಗಿ ನಾನು ಸದರಿ ಸಹಿಗಳನ್ನು ಹಾಕಿರುತ್ತೇನೆ ಎಂಬುದು ನನಗೆ ತಿಳಿದಿರುವುದಿಲ್ಲ.

**(ಈ ಹಂತದಲ್ಲಿ ಸಾಕ್ಷಿದಾರರು ಅಭಿಯೋಜನೆಯ ಸಾಕ್ಷಿಗೆ ಪ್ರತಿಕೂಲ ಸಾಕ್ಷಿಯನ್ನು ನುಡಿಯುತ್ತಿರುವುದರಿಂದ ಪಾಟೀ ಸವಾಲಿಗೆ ಅನುಮತಿಯನ್ನು ಕೋರಿದ್ದು, ಪಾಟೀ ಸವಾಲಿಗಾಗಿ ಅನುಮತಿಯನ್ನು ನೀಡಲಾಯಿತು)**

**<u>ಪಾಟೀ ಸವಾಲುಃ ಮಾನ್ಯ ಸಹಾಯ ಸರ್ಕಾರಿ ಅಭಿಯೋಜಕ ರವರಿಂದ.</u>**

ನಿಪಿ 2(ಬಿ) ರಲ್ಲಿರುವ ಸಹಿಯನ್ನು ನಾನು 09.11.2018 ರಂದು ಘಟನಾ ಸ್ಥಳದಲ್ಲಿ ಹಾಕಿರುತ್ತೇನೆ ಎಂದರೆ ಸರಿಯಲ್ಲ. ಸದರಿ ಮಹಜರನ್ನು ಆ ದಿನ ಪೊಲೀಸರು 10.00 ರಿಂದ 11.00 ಗಂಟೆ ಸಮಯದಲ್ಲಿ ಮಾಡಿರುತ್ತಾರೆ ಮತ್ತು ಅದರಲ್ಲಿ ಬರೆದಿರುವ ಸಂಗತಿಗಳನ್ನು ನನಗೆ ತಿಳಿಸಿರುತ್ತಾರೆ ಎಂದರೆ ಸರಿಯಲ್ಲ. ಆರೋಪಿತರು ರೇವಮ್ಮರವರಿಗೆ ಹೊಡೆದ ವಿಚಾರವಾಗಿ ಪೊಲೀಸರು ಘಟನಾ ಸ್ಥಳಕ್ಕೆ ಬಂದಿರುತ್ತಾರೆ ಎಂದರೆ ಸರಿಯಲ್ಲ. ಆ ದಿನ ನನ್ನೊಂದಿಗೆ ಚಾಸಾ 1 ಮತ್ತು ಚಾಸಾ 3 ರವರು ಸದರಿ ಮಹಜರ್ ಗೆ ಸಹಿ ಹಾಕಿರುತ್ತಾರೆ ಎಂದರೆ ಸರಿಯಲ್ಲ. ಆ ದಿನ

ಪೊಲೀಸರು ನನ್ನ ಸಮಕ್ಷಮ ಒಂದು ದೊಣ್ಣೆಯನ್ನು ಅಮಾನತುಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ.

ನಿಪಿ 3(ಬಿ) ರಲ್ಲಿರುವ ಸಹಿಯನ್ನು ನಾನು ದಿನಾಂಕ 09.11.2018 ರಂದು ಮಧ್ಯಾಹ್ನಕ್ಕೆ ಅರಕಲಗೂಡು ಸರ್ಕಾರಿ ಆಸ್ಪತ್ರೆಯಲ್ಲಿ ಹಾಕಿರುತ್ತೇನೆ ಎಂದರೆ ಸರಿಯಲ್ಲ. 5ನೇ ಆರೋಪಿಯು ಚಾಸಾ 1 ರವರಿಗೆ ಕೊಲೆ ಬೆದರಿಕೆ ಹಾಕಿರುವ ಸಲುವಾಗಿ ಆ ದಿನ ಅಲ್ಲಿ ಮಹಜರ್ ಮಾಡಲಾಯಿತು ಎಂದರೆ ಸರಿಯಲ್ಲ. ಆ ದಿನ ನನ್ನೊಂದಿಗೆ ಚಾಸಾ 1 ಮತ್ತು 3 ಸದರಿ ಮಹಜರ್ ಗೆ ಸಹಿ ಹಾಕಿರುತ್ತಾರೆ ಎಂದರೆ ಸರಿಯಲ್ಲ. ನನಗೆ ಎಲ್ಲಾ ವಿಷಯ ತಿಳಿದಿದ್ದರೂ ಸಹ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಆರೋಪಿ ಪರವಾಗಿ ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ**

ಪಾಟೀ ಸವಾಲು ಇರುವುದಿಲ್ಲ.

(ಸಾಕ್ಷಿಯ ಹೇಳಿಕೆಯನ್ನು ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಲಾಯಿತು.)

ಓ.ಹೇ.ಕೇ. ಸರಿಯಿದೆ.

**ಸಿವಿಲ್ ಮತ್ತು ಜೆ.ಎಂ.ಎಫ್.ಸಿ.ನ್ಯಾಯಾಧೀಶರು,**
**ಅರಕಲಗೂಡು.**